# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಪ್ರಧಾನ ಕಾರ್ಯದರ್ಶಿ ಮತ್ತು ಕಾರ್ಯದರ್ಶಿಗಳ ಮೊಬೈಲ್ ಫೋನ್ ಖರೀದಿ ಮೊತ್ತವನ್ನು ಪರಿಷ್ಕರಿಸುವ ಬಗ್ಗೆ

ಓದಲಾಗಿದೆ:-

1) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 30 ಡಿಟಿಎನ್ 2003, ದಿನಾಂಕ: 12.08.2003
2) ಸರ್ಕಾರದ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ (ಎಂಎಸ್‌ಎಂಇ & ಗಣಿ) ರವರ ಪತ್ರ ಸಂಖ್ಯೆ: ವಾಕೈ 06 ಮಾ2015, ದಿನಾಂಕ: 02.09.2015
3) ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 654 ವೆಚ್ಚ-12/2015, ದಿನಾಂಕ: 14.10.2015

**ಪ್ರಸ್ತಾವನೆ:**

ಮೇಲಿನ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಮಾನ್ಯ ಸಚಿವರು, ಸರ್ಕಾರದ ಮುಖ್ಯ ಕಾರ್ಯದರ್ಶಿ / ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳಿಗೆ ಮೊಬೈಲ್ ದೂರವಾಣಿ ಉಪಕರಣವನ್ನು ಖರೀದಿಸಲು ರೂ. 10,000-00 (ರೂಪಾಯಿ ಹತ್ತು ಸಾವಿರ ಮಾತ್ರ) ಮಂಜೂರಾತಿ ನೀಡಲಾಗಿದೆ. ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಸರ್ಕಾರದ ಕಾರ್ಯದರ್ಶಿ, ವಾಣಿಜ್ಯ & ಕೈಗಾರಿಕೆ ಇಲಾಖೆರವರು, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ ಮತ್ತು ಕಾರ್ಯದರ್ಶಿಗಳ ಉಪಯೋಗಕ್ಕಾಗಿ ಮೊಬೈಲ್ ಫೋನ್ ಖರೀದಿಗೆ ರೂ. 10,000-00 ಗಳ ಮೊತ್ತವನ್ನು ಸರ್ಕಾರವು ನಿಗದಿ ಮಾಡಿರುತ್ತದೆ. ಪ್ರಸ್ತುತ ಸನ್ನಿವೇಶದಲ್ಲಿ ಪ್ರತಿಷ್ಠಿತ ಕಂಪನಿಯ ಉತ್ತಮ ಗುಣಮಟ್ಟದ ಸ್ಮಾರ್ಟ್ ಫೋನ್ ಬೆಲೆಯು ಕನಿಷ್ಠ ರೂ. 50,000-00 ಗಳಾಗಿರುತ್ತದೆ. ಆದರೆ ಪ್ರಸ್ತುತ ಸಮಯದಲ್ಲಿ ಸರ್ಕಾರವು ನೀಡುತ್ತಿರುವ ರೂ. 10,000-00 ಗಳ ಮೊತ್ತದಲ್ಲಿ ಒಳ್ಳೆಯ ಗುಣಮಟ್ಟದ ಸ್ಮಾರ್ಟ್ ಫೋನ್ ಖರೀದಿಸಲು ಸಾಧ್ಯವಾಗುತ್ತಿಲ್ಲ. ಆದುದರಿಂದ ಫೋನ್ ಖರೀದಿಗೆ ಸರ್ಕಾರವು ನಿಗದಿ ಮಾಡಿರುವ ಮೊತ್ತವನ್ನು ಪರಿಷ್ಕರಿಸುವಂತೆ ಕೋರಿರುತ್ತಾರೆ. ಈ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 201 ಡಿಟಿಎನ್ 2015, ಬೆಂಗಳೂರು, ದಿನಾಂಕ: 20-11-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮಾನ್ಯ ಸಚಿವರು / ಕಾರ್ಯದರ್ಶಿಗಳು ಹಾಗೂ ಅದಕ್ಕಿಂತ ಮೇಲ್ಪಟ್ಟ ದರ್ಜೆಯ ಅಧಿಕಾರಿಗಳಿಗೆ ಈ ಹಿಂದೆ ರೂ. 10,000-00 (ರೂಪಾಯಿ ಹತ್ತು ಸಾವಿರ ಮಾತ್ರ) ಗಳ ಮಿತಿಗೊಳಪಟ್ಟು ಮೊಬೈಲ್ ಉಪಕರಣವನ್ನು ಒದಗಿಸುವ ಅವಕಾಶ ಕಲ್ಪಿಸಲಾಗಿದ್ದು, ಸದರಿ ಮಿತಿಯನ್ನು ಪರಿಷ್ಕರಿಸಿ ರೂ. 25,000-00 (ರೂಪಾಯಿ ಇಪ್ಪತ್ತೈದು ಸಾವಿರಗಳು ಮಾತ್ರ) ಗಳಿಗೆ ಹೆಚ್ಚಿಸಿ ಸರ್ಕಾರವು ಮಂಜೂರಾತಿ ನೀಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 654 ವೆಚ್ಚ-12/15, ದಿನಾಂಕ: 14.10.2015ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ.

--------2

ಸಚಿವರುಗಳ ಮೊಬೈಲ್ ಉಪಕರಣಗಳಿಗೆ ಸಂಬಂಧಿಸಿದ ವೆಚ್ಚವನ್ನು ಆಯವ್ಯಯ ಲೆಕ್ಕಶೀರ್ಷಿಕೆ "2013-00-800-0-01-051 (ಯೋಜನೇತರ)" ಮತ್ತು ಅಧಿಕಾರಿಗಳ ಮೊಬೈಲ್ ಉಪಕರಣಗಳಿಗೆ ಸಂಬಂಧಿಸಿದ ವೆಚ್ಚವನ್ನು ಆಯವ್ಯಯದ ಲೆಕ್ಕ ಶೀರ್ಷಿಕೆ "2052-00-090-0-01-051 (ಸಾಮಾನ್ಯ ವೆಚ್ಚಗಳು) (ಯೋಜನೇತರ)" ಇದರಡಿಯಲ್ಲಿ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಲ್. ಗಂಗಾಧರ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿ.ಆ.ಸು.ಇಲಾಖೆ (ಕಾರ್ಯಕಾರಿ)

ಇವರಿಗೆ:-

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್ಎಸ್ಎ) (ಎ ಮತ್ತು ಇ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01.
2) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳವರಿಗೆ : ಕಾರ್ಯದರ್ಶಿಗಳವರಿಗೆ
3) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ
4) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳಿಗೆ
5) ಮುಖ್ಯ ಮಂತ್ರಿಗಳ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ
6) ಸರ್ಕಾರದ ಉಪ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ
7) ಎಲ್ಲಾ ಸಚಿವರುಗಳ ಆಪ್ತ ಕಾರ್ಯದರ್ಶಿಗಳಿಗೆ
8) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಆಯವ್ಯಯ-2)
9) ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ-3), ಆರ್ಥಿಕ ಇಲಾಖೆ
10) ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ಲೆಕ್ಕಪತ್ರ-2)
11) ಶಾಖಾ ರಕ್ಷಾ ಕಡತ
12) ಹೆಚ್ಚುವರಿ ಪ್ರತಿಗಳು